# ನಾಳೆ ವಿವಿಯಲ್ಲಿ ಕನಕ ಗಂಗೋತ್ರಿ, ವಿದ್ಯಾಭೂಷಣ್ ಉದ್ಘಾಟನೆ

**ಕೊಣಾಜೆ:** ಮಂಗಳೂರು ವಿಶ್ವವಿದ್ಯಾನಿಲಯ, ಕನಕದಾಸ ಸಂಶೋಧನ ಕೇಂದ್ರ, ಮಂಗಳಗಂಗೋತ್ರಿ 'ಕನಕ ಜಯಂತಿ' ಪ್ರಯುಕ್ತ 2024-25ನೇ ಸಾಲಿನ ಶೈಕ್ಷಣಿಕ ವರ್ಷದ 'ಕನಕ ಕೀರ್ತನ ಗಂಗೋತ್ರಿ' ಶೈಕ್ಷಣಿಕ ಸಂಸ್ಥೆಗಳ ಹಾಗೂ ಸಾರ್ವಜನಿಕರ ಸಾಮುದಾಯಿಕ ಪಾಲ್ಗೊಳ್ಳುವಿಕೆಯ ಕನಕದಾಸರ ಕೀರ್ತನೆಗಳ ಸಮೂಹ ಗಾಯನ ಕಾರ್ಯಕ್ರಮವು ಧರ್ಮನಿಧಿ ಯೋಗಪೀಠ, ಮಾನವಪ್ರಜ್ಞೆ, ಮತ್ತು ಯೋಗ ವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ವಿಶ್ವಮಂಗಳ ಪದವಿಪೂರ್ವ ಕಾಲೇಜು, ಕೊಣಾಜೆ ಇವರ ಸಹಯೋಗದೊಂದಿಗೆ ನ. 21ರಂದು ಪೂರ್ವಾಹ್ನ 10 ರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಮಂಗಳಸಭಾಂಗಣದಲ್ಲಿ ನಡೆಯಲಿರುವುದು. ಕಾರ್ಯಕ್ರಮದ ಉದ್ಘಾಟನೆಯನ್ನು ಬೆಂಗಳೂರಿನ ಪ್ರಸಿದ್ಧ ಗಾಯಕರು, ಸಂಗೀತ ಕಲಾರತ್ನ ಡಾ. ವಿದ್ಯಾಭೂಷಣ ಇವರು ನೆರವೇರಿಸಲಿದ್ದು ಅಧ್ಯಕ್ಷತೆಯನ್ನು ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಪಿ.ಎಲ್. ಧರ್ಮ ವಹಿಸಲಿರುವರು. ಕುಲಸಚಿವ ಕೆ. ರಾಜು ಮೊಗವೀರ ಕೆ.ಎ.ಎಸ್. ಶುಭಾಶಂಸನೆ ನೀಡಲಿರುವರು. ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟು ಸದಸ್ಯರು, ಕನಕದಾಸ ಸಂಶೋಧನ ಕೇಂದ್ರದ ಸಲಹಾ ಸಮಿತಿ ಸದಸ್ಯ ರಘುರಾಜ್ ಕದ್ರಿ, ಎಸ್.ವಿ.ಪಿ ಕನ್ನಡ ಅಧ್ಯಯನ ಸಂಸ್ಥೆಯ ಅಧ್ಯಕ್ಷ ಡಾ. ಸೋಮಣ್ಣ ಹೊಂಗಳ್ಳಿ, ಕನಕದಾಸ ಸಂಶೋಧನ ಕೇಂದ್ರದ ಸಂಯೋಜಕ ಡಾ. ಧನಂಜಯ ಕುಂಬ್ಳೆ ಉಪಸ್ಥಿತರಿರುವರು.

ಉದ್ಘಾಟನಾ ಸಮಾರಂಭದ ಬಳಿಕ 'ಕನಕ ಕೀರ್ತನ ಗಂಗೋತ್ರಿ' ಕನಕದಾಸರ ಕೀರ್ತನೆಗಳ ಗಾಯನ ಕಾರ್ಯಕ್ರಮ ಪ್ರೌಢಶಾಲೆ, ಪದವಿಪೂರ್ವ, ಪದವಿ, ಸ್ನಾತಕೋತ್ತರ ಪದವಿ, ಅಧ್ಯಾಪಕ, ಅಧ್ಯಾಪಕೇತರ ಮತ್ತು ಸಾರ್ವಜನಿಕ ಮಟ್ಟದಲ್ಲಿ ಕನಕದಾಸರ ಕೀರ್ತನೆಗಳ 'ಸಮೂಹ ಗಾಯನ' ಕಾರ್ಯಕ್ರಮವು ನಡೆಯಲಿದೆ ಎಂದು ಕನಕದಾಸ ಸಂಶೋಧನ ಕೇಂದ್ರ ಸಂಯೋಜಕ ಡಾ. ಧನಂಜಯ ಕುಂಬ್ಳೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿಗದಿಪಡಿಸಿದರು.

ಭಾಗವಹಿಸಿದ್ದರು.

# ‘ಕನಕ ಕೀರ್ತನ ಗಂಗೋತ್ರಿ ನಾಳೆ

ಮುಡಿಪು: ಮಂಗಳೂರು ವಿಶ್ವವಿದ್ಯಾಲಯ, ಕನಕದಾಸ ಸಂಶೋಧನಾ ಕೇಂದ್ರದ ವತಿಯಿಂದ 2024-25ನೇ ಸಾಲಿನ ಶೈಕ್ಷಣಿಕ ವರ್ಷದ ‘ಕನಕ ಕೀರ್ತನ ಗಂಗೋತ್ರಿ’ ನ. 21ರಂದು ಬೆಳಿಗ್ಗೆ 10ಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಮಂಗಳಸಭಾಂಗಣದಲ್ಲಿ ನಡೆಯಲಿದೆ. ಗಾಯಕ ವಿದ್ಯಾಭೂಷಣ ಕಾರ್ಯಕ್ರಮ ಉದ್ಘಾಟಿಸುವರು. ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿ ಪಿ.ಎಲ್. ಧರ್ಮ ಅಧ್ಯಕ್ಷತೆ ವಹಿಸುವರು.

# ಮಂಗಳೂರು ವಿಶ್ವವಿದ್ಯಾನಿಲಯ

## ಕನಕದಾಸ ಅಧ್ಯಯನ ಪೀಠ
## ಕನಕದಾಸ ಸಂಶೋಧನ ಕೇಂದ್ರ

ಮಂಗಳಗಂಗೋತ್ರಿ – 574199

**ಸಹಯೋಗ :**

**ಧರ್ಮನಿಧಿ ಯೋಗಪೀಠ, ಮಾನವಪ್ರಜ್ಞೆ ಮತ್ತು ಯೋಗ ವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ**
**ಹಾಗೂ ವಿಶ್ವಮಂಗಳ ಪದವಿ ಪೂರ್ವ ಕಾಲೇಜು, ಕೊಣಾಜೆ**



## 'ಕನಕ ಜಯಂತಿ'

ಪ್ರಯುಕ್ತ

## 'ಕನಕ ಕೀರ್ತನ ಗಂಗೋತ್ರಿ'

**ಶೈಕ್ಷಣಿಕ ಸಂಸ್ಥೆಗಳ ಹಾಗೂ ಸಾರ್ವಜನಿಕರ ಸಾಮುದಾಯಿಕ ಪಾಲ್ಗೊಳ್ಳುವಿಕೆಯ**
**ಕನಕದಾಸರ ಕೀರ್ತನೆಗಳ ಗಾಯನ ಮತ್ತು ಸಮೂಹ ಗಾಯನ ಕಾರ್ಯಕ್ರಮ.**

**ಅಧ್ಯಕ್ಷತೆ**

**ಪ್ರೊ. ಪಿ.ಎಲ್. ಧರ್ಮ**

ಕುಲಪತಿಗಳು, ಮಂಗಳೂರು ವಿಶ್ವವಿದ್ಯಾನಿಲಯ

**ಉದ್ಘಾಟನೆ**

**ಸಂಗೀತ ಕಲಾರತ್ನ ಡಾ. ವಿದ್ಯಾಭೂಷಣ**

ಪ್ರಸಿದ್ಧ ಗಾಯಕರು, ಬೆಂಗಳೂರು

**ಶುಭಾಶಂಸನೆ**

**ಶ್ರೀ ಕೆ. ರಾಜು ಮೊಗವೀರ** ಕೆಎಎಸ್

ಕುಲಸಚಿವರು, ಮಂಗಳೂರು ವಿಶ್ವವಿದ್ಯಾನಿಲಯ

**ಗೌರವ ಉಪಸ್ಥಿತಿ**

**ಶ್ರೀ ರಘುರಾಜ್ ಕದ್ರಿ**

ಸಿಂಡಿಕೇಟು ಸದಸ್ಯರು, ಮಂ.ವಿ.ವಿ ಹಾಗೂ ಕನಕದಾಸ ಸಂಶೋಧನ ಕೇಂದ್ರದ ಸಲಹಾ ಸಮಿತಿ ಸದಸ್ಯರು

**ಡಾ. ಸೋಮಣ್ಣ ಹೊಂಗಳ್ಳಿ**

ಅಧ್ಯಕ್ಷರು, ಎಸ್.ವಿ.ಪಿ. ಕನ್ನಡ ಅಧ್ಯಯನ ಸಂಸ್ಥೆ, ಮಂಗಳೂರು ವಿಶ್ವವಿದ್ಯಾನಿಲಯ

**21 ನವೆಂಬರ್ 2024ರಂದು ಗುರುವಾರ ಪೂರ್ವಾಹ್ನ 10.00 ಗಂಟೆಗೆ**
**ಮಂಗಳ ಸಭಾಂಗಣ, ಮಂಗಳೂರು ವಿಶ್ವವಿದ್ಯಾನಿಲಯ**

## ತಮಗೆಲ್ಲರಿಗೂ ಆದರದ ಸ್ವಾಗತ

**ಡಾ. ಧನಂಜಯ ಕುಂಬ್ಳೆ**
ಸಂಯೋಜಕರು
ಕನಕದಾಸ ಸಂಶೋಧನ ಕೇಂದ್ರ

**ಪ್ರಾಂಶುಪಾಲರು**
ವಿಶ್ವಮಂಗಳ ಪದವಿ ಪೂರ್ವ
ಕಾಲೇಜು, ಕೊಣಾಜೆ

**ಅಧ್ಯಕ್ಷರು**
ಧರ್ಮನಿಧಿ ಯೋಗಪೀಠ, ಮಾನವಪ್ರಜ್ಞೆ
ಮತ್ತು ಯೋಗ ವಿಜ್ಞಾನ ವಿಭಾಗ
ಮಂಗಳೂರು ವಿಶ್ವವಿದ್ಯಾನಿಲಯ

**ಕುಲಸಚಿವರು**
ಮಂಗಳೂರು ವಿಶ್ವವಿದ್ಯಾನಿಲಯ
ಮಂಗಳಗಂಗೋತ್ರಿ

(ಮಂಗಳೂರು ತಾಲೂಕು ವ್ಯಾಪ್ತಿಯ ಉಳ್ಳಾಲ, ಮಂಗಳೂರು, ಬಂಟ್ವಾಳ, ಪುತ್ತೂರು, ಮೂಲ್ಕಿ, ಮೂಡಬಿದ್ರೆ ಹಾಗು ಗಡಿನಾಡು ಪ್ರದೇಶವಾದ ಮಂಜೇಶ್ವರ, ಕಾಸರಗೋಡು ತಾಲೂಕು ವ್ಯಾಪ್ತಿಯ ಪ್ರೌಢಶಾಲೆ, ಪದವಿಪೂರ್ವ ಕಾಲೇಜುಗಳು ಮತ್ತು ಮಂಗಳೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಕಾಲೇಜುಗಳು, ದಕ್ಷಿಣ ಕನ್ನಡ, ಉಡುಪಿ, ಕೊಡಗು ಜಿಲ್ಲೆಯ ವಿಶ್ವೇಶ್ವರಯ್ಯ ತಾಂತ್ರಿಕ ಹಾಗೂ ರಾಜೀವ್ ಗಾಂಧಿ ವೈದ್ಯಕೀಯ ವಿಶ್ವವಿದ್ಯಾನಿಲಯ, ಕಣ್ಣೂರು ವಿಶ್ವವಿದ್ಯಾನಿಲಯ, ಕೇಂದ್ರೀಯ ವಿಶ್ವವಿದ್ಯಾನಿಲಯ ಕಾಸರಗೋಡು ಇಲ್ಲಿನ ಪದವಿ ಮತ್ತು ಸ್ನಾತಕೋತ್ತರ ವಿಭಾಗಗಳ ವಿದ್ಯಾರ್ಥಿಗಳು, ಸಿಬ್ಬಂದಿಗಳು ಹಾಗೂ ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯ ಸಾರ್ವಜನಿಕರು ಸಾಮುದಾಯಿಕ ಪಾಲ್ಗೊಳ್ಳುವಿಕೆಯ ಕಾರ್ಯಕ್ರಮ)